# ಕರ್ನಾಟಕ ಸರ್ಕಾರದ ನಡವಳಿಗಳು

| | |
|---|---|
| ವಿಷಯ | ಹೆಚ್‌ಐವಿ / ಕುಷ್ಠರೋಗಗಳಿಂದ ಪೀಡಿತರಾದವರ ಅರ್ಹ ಮಕ್ಕಳಿಗೆ ಉನ್ನತ ಶಿಕ್ಷಣಕ್ಕಾಗಿ ವಿದ್ಯಾರ್ಥಿ ವೇತನ ಹಾಗೂ ಉಚಿತ ಶಿಕ್ಷಣವನ್ನು ಒದಗಿಸುವ ಬಗ್ಗೆ. |
| ಓದಲಾಗಿದೆ | 1. 2013-14ನೇ ಸಾಲಿನ ಪರಿಷ್ಕೃತ ಆಯವ್ಯಯದ ಘೋಷಣೆ ಸಂಖ್ಯೆ: 192.<br>2. ದಿ:31-08-2013ರಂದು ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಹೊಸ ಕಾರ್ಯಕ್ರಮಗಳ ಅನುಷ್ಠಾನದ ಬಗ್ಗೆ ನಡೆದ ಸಭೆ |

******

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ 2013-14 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-192 ರಲ್ಲಿ ಹೆಚ್‌ಐವಿ / ಕುಷ್ಠರೋಗಗಳಿಂದ ಪೀಡಿತರಾದವರ ಅರ್ಹ ಮಕ್ಕಳಿಗೆ ಉನ್ನತ ಶಿಕ್ಷಣಕ್ಕಾಗಿ ವಿದ್ಯಾರ್ಥಿ ವೇತನ ಹಾಗೂ ಉಚಿತ ಶಿಕ್ಷಣವನ್ನು ಒದಗಿಸುವ ಬಗ್ಗೆ ಘೋಷಿಸಲಾಗಿದೆ.

ಮೇಲೆ ಓದಲಾದ (2)ರ ಸಭೆಯಲ್ಲಿ ಈ ಕಾರ್ಯಕ್ರಮ ಅನುಷ್ಠಾನಗೊಳಿಸಲು ತಾತ್ವಿಕ ಒಪ್ಪಿಗೆಯನ್ನು ನೀಡಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 132 ಮಾಹಿತಿ 2013, ಬೆಂಗಳೂರು ದಿನಾಂಕ: 31-08-2013**

ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಕಾಲೇಜು / ಸಂಸ್ಥೆಗಳಲ್ಲಿ ಪದವಿ ಅಥವಾ ಸ್ನಾತಕೋತ್ತರ ಕೋರ್ಸ್, ವೃತ್ತಿ ಶಿಕ್ಷಣ ಕೋರ್ಸ್ ಹಾಗೂ ವೃತ್ತಿಪರ ಕೋರ್ಸ್‌ಗಳಲ್ಲಿ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಹೆಚ್‌ಐವಿ / ಕುಷ್ಠರೋಗಗಳಿಂದ ಪೀಡಿತರಾದ ಪಾಲಕರ ಅರ್ಹ ಮಕ್ಕಳಿಗೆ ಉನ್ನತ ಶಿಕ್ಷಣಕ್ಕಾಗಿ ವಿದ್ಯಾರ್ಥಿ ವೇತನ ಹಾಗೂ ಉಚಿತ ಶಿಕ್ಷಣವನ್ನು ನೀಡುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರಿಗೆ ಈ ಕೆಳಕಂಡ ಷರತ್ತುಗಳ ಆಧಾರ ತಾತ್ವಿಕ ಅನುಮತಿ ನೀಡಲಾಗಿದೆ.

**ಷರತ್ತುಗಳು:-**

1. ವಿದ್ಯಾರ್ಥಿಗಳನ್ನು ಖಚಿತವಾಗಿ ಆಯ್ಕೆ ಮಾಡಿಕೊಳ್ಳುವುದು, ಅನುಷ್ಠಾನಗೊಳ್ಳಬೇಕಾದ ಕ್ರಮಗಳ ಬಗ್ಗೆ ಸವಿವರ ಯೋಜನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವುದು.
2. ಈ ಯೋಜನೆ ಅನುಷ್ಠಾನದ ಬಗ್ಗೆ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳುವುದು.
3. ಅಗತ್ಯವಿರುವ ಕಡೆ ಕೆ.ಟಿ.ಪಿ.ಪಿ. ನಿಯಮಗಳನ್ನು ಚಾಚೂ ತಪ್ಪದೆ ಪಾಲಿಸುವುದು.
4. ವಿವರವಾದ ಮಾರ್ಗಸೂಚಿಗಳನ್ನು, ಕಾಲೇಜು ಮುಖ್ಯಸ್ಥರು ವಿದ್ಯಾರ್ಥಿ ವೇತನ ಮಂಜೂರು ಮಾಡುವ ಮುನ್ನಾ ಪರಿಶೀಲಿಸಬೇಕಾದ ದಾಖಲೆಗಳು, ಅರ್ಹತೆಗಳು, ಇತ್ಯಾದಿಗಳು ಸವಿವರ ಯೋಜನಾ ವರದಿಯನ್ನು ಸೇರಿಸುವುದು.
5. ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದಂತೆ ಸೂಚನೆ ನಿಯಮಗಳು, ಈ ಯೋಜನೆ ಅನ್ವಯವಾಗುವುದಿದ್ದರೆ ಅವುಗಳನ್ನು ಉಲ್ಲೇಖಿಸಿ ಪಾಲಿಸುವ ಬಗ್ಗೆ ವರದಿಯಲ್ಲಿ ಸೇರಿಸುವುದು.

..2....

6. ಮಂಜೂರು ಮಾಡಿದ ಮೊತ್ತ ವಿದ್ಯಾರ್ಥಿಗಳ ಬ್ಯಾಂಕ್ ಅಕೌಂಟ್‌ಗಳಿಗೆ ಜಮಾ ಮಾಡುವಲ್ಲಿ ಕ್ರಮವಹಿಸುವುದು.
7. ಈ ಯೋಜನೆ ಅನುಷ್ಠಾನಕ್ಕೆ ಬೇಕಾಗುವ ಅನುದಾನವನ್ನು 2013-14 ನೇ ಸಾಲಿನ ಪರಿಷ್ಕೃತ ಆಯವ್ಯಯದಲ್ಲಿ ನಿಗದಿಪಡಿಸಿರುವ ಲೆಕ್ಕಶೀರ್ಷಿಕೆ 2203-00-107-1-00 (ಯೋಜನೆ) ವಿದ್ಯಾರ್ಥಿ ವೇತನಗಳು ಇದರಡಿ ನಿಗದಿಪಡಿಸಿರುವ ಆಯವ್ಯಯದ ಮಿತಿಯಲ್ಲಿ ಭರಿಸುವುದು. ಭರಿಸುವ ಮುನ್ನಾ ಸವಿವರ ಯೋಜನಾ ವರದಿ ಹಾಗೂ ಕ್ರಿಯಾ ಯೋಜನೆಗೆ ಸರ್ಕಾರದ ಅನುಮೋದನೆ ಪಡೆಯತಕ್ಕದ್ದು.
8. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂ: ಆಇ 634 ವೆಚ್ಚ-8 2013, ದಿ:31-08-2013ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು**
**ಅವರ ಹೆಸರಿನಲ್ಲಿ**

**(ಐ.ಎಫ್.ಮಾಗಿ)**
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
**ಸರ್ಕಾರದ ಅಧೀನ ಕಾರ್ಯದರ್ಶಿ**
**ಶಿಕ್ಷಣ ಇಲಾಖೆ (ಯೋಜನೆ & ಇ-ಆಡಳಿತ)**

<u>ಪ್ರತಿ:</u>

1. ಮಹಾಲೇಖಪಾಲರು ಮಹಾಲೇಖಪಾಲಕರು, ಕರ್ನಾಟಕ (ಆಡಿಟ್ 1 & 2) ಬೆಂಗಳೂರು.
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು.
4. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
5. ನಿರ್ದೇಶಕರು, ಖಜಾನೆಗಳ ಇಲಾಖೆ, ಬೆಂಗಳೂರು.
6. ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
7. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು
8. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
9. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯಕದರ್ಶಿಗಳು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು.
11. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಆಯವ್ಯಯ ಸಂಪನ್ಮೂಲ ಹಾಗೂ ವೆಚ್ಚ), ಇವರ ಆಪ್ತ ಕಾರ್ಯದರ್ಶಿಗಳು.
12. ಕಛೇರಿ ಪ್ರತಿ/ ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.

<u>ಹಿಂಬರಹ</u>

<u>ಪತ್ರ ಸಂಖ್ಯೆ: ಡಿಟಿಇ 31 ಎಸ್‌ಸಿಹೆಚ್(1) 2013-14 ದಿನಾಂಕ: 13-09-2013.</u>

ಈ ಸರ್ಕಾರದ ಪತ್ರದಲ್ಲಿ ತಿಳಿಸಿರುವಂತೆ ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನಿತರಹಿತ ಸಿಇಟಿ ಮೂಲಕ ಆಯ್ಕೆಯಾದ ವಿದ್ಯಾರ್ಥಿಗಳು ಇಂಜಿನಿಯರಿಂಗ್ ಕಾಲೇಜುಗಳ ವಿವಿಧ ವೃತಿಪರ ಕೋರ್ಸುಗಳಿಗೆ ಆಯ್ಕೆಯಾಗಿರುವ ಹಾಗೂ Online Interactive Counselling Nodal Centre ಮೂಲಕ ಆಯ್ಕೆಯಾದಂತಹ ವಿದ್ಯಾರ್ಥಿಗಳು ಸರ್ಕಾರಿ/ಅನುದಾನಿತ/ಅನುದಾನರಹಿತ ಪಾಲಿಟೆಕ್ನಿಕ್‌ಗಳಲ್ಲಿ ಪ್ರಿನ್ಸಿಪಾಲರುಗಳಿಗೆ ಮುಂದಿನ ಕ್ರಮಕೈಗೊಳ್ಳಲು ಹಾಗೂ ಶೀಘ್ರವಾಗಿ ತೆಗೆದುಕೊಂಡಿರುವ ಕ್ರಮದ ಬಗ್ಗೆ ಮಾಹಿತಿಯನ್ನು ಈ ಕಛೇರಿಗೆ ಕಳುಹಿಸಲು ಹಾಗೂ ಇ-ಮೇಲ್ ಐಡಿ ಮೂಲಕವು ಕಳುಹಿಸಲು ತಿಳಿಸಲಾಗಿದೆ. **E-mail id : <u>dteacmsection@yahoo.com</u>**

ಪ್ರತಿ:
1) ಎಲ್ಲಾ ಜಿಲ್ಲಾಧಿಕಾರಿಗಳು, ಇ. ಆಡಳಿತ, ತಾಂ.ಶಿ.ಇ, ಬೆಂಗಳೂರು.

ನಿರ್ದೇಶಕರು

13/9/13